## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಸಾಲಿನಲ್ಲಿ ವಿಶ್ವವಿದ್ಯಾಲಯಗಳಲ್ಲಿ ಎಂ.ಫಿಲ್ ಮತ್ತು ಪಿ.ಹೆಚ್.ಡಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಜೆ.ಆರ್.ಎಫ್ ಮಾದರಿಯಲ್ಲಿ ಫೆಲೋಶಿಪ್ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: MWD 118 MDS 2022, ದಿನಾಂಕ:08.04.2022.
2. ಸರ್ಕಾರದ ಆದೇಶ ಸಂಖ್ಯೆ: MWD 462 MDS 2016, ದಿನಾಂಕ: 24.01.2017.
3. ಸಮಾಜ ಕಲ್ಯಾಣ ಇಲಾಖೆಯ ಆಯುಕ್ತರ ಸುತ್ತೋಲೆ ಸಂಖ್ಯೆ: ಸಕನಿ:ಇ.ಡಿ:1 :ಸಿಆರ್:3:2004-05 ದಿ: 29.06.2004.
4. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರ ಏಕ ಕಡತ ಸಂಖ್ಯೆ:ಅಸಂನಿ/ಎಂ.ಫಿಲ್ & ಪಿ.ಹೆಚ್.ಡಿ/ಸಿಆರ್-02:2022-23 ದಿ:13.04.2022.

* * * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ:(1)ರಲ್ಲಿನ ಸರ್ಕಾರದ ಆದೇಶ ದಿನಾಂಕ:08-04-2022 ರಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಯ 2021-22ನೇ ಸಾಲಿನ ಯೋಜನೆಗಳನ್ನು 2022-23ನೇ ಸಾಲಿಗೆ ಮುಂದುವರೆಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(02)ರಲ್ಲಿನ ಸರ್ಕಾರದ ಆದೇಶ ದಿನಾಂಕ:24-01-2017 ರಲ್ಲಿ ವಿಶ್ವವಿದ್ಯಾಲಯಗಳಲ್ಲಿ ಎಂ.ಫಿಲ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಜೆ.ಆರ್.ಎಫ್. ಮಾದರಿಯಲ್ಲಿ 2 ವರ್ಷಗಳ ಅವಧಿಗೆ ಮತ್ತು ಪಿ.ಹೆಚ್.ಡಿ. ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ 3 ವರ್ಷಗಳ ಅವಧಿಗೆ ಮಾತ್ರ ಪ್ರತಿ ಮಾಹೆಯಾನ ರೂ.25,000/-ಗಳು ಮತ್ತು ಪ್ರತಿ ವರ್ಷಕ್ಕೆ ಒಂದು ಬಾರಿಗೆ ರೂ.10,000/-ಗಳ ನಿರ್ವಹಣಾ ವೆಚ್ಚವನ್ನು (ಪ್ರತಿ ವರ್ಷಕ್ಕೆ ಒಟ್ಟು ಮೊತ್ತ ರೂ.3.10 ಲಕ್ಷಗಳು) ಫೆಲೋಶಿಪ್ ನೀಡಲು ಮಂಜೂರಾತಿ ನೀಡಿ ಆದೇಶಿಸಲಾಗಿರುತ್ತದೆ.

ಸದರಿ ಅನುದಾನವನ್ನು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮತ್ತು ಶುಲ್ಕ ಮರುಪಾವತಿ ಯೋಜನೆಯ ಲೆಕ್ಕಶೀರ್ಷಿಕೆ 2225-04-277-0-04(117)ರಡಿ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(03)ರಲ್ಲಿನ ಸಮಾಜ ಕಲ್ಯಾಣ ಇಲಾಖೆಯ ಆಯುಕ್ತರ ಸುತ್ತೋಲೆ ದಿನಾಂಕ:29.06.2004 ರನ್ವಯ ಎಂ.ಫಿಲ್ ಮತ್ತು ಪಿ.ಹೆಚ್.ಡಿ ಸಂಶೋಧನೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಸಂಶೋಧನಾ ಫೆಲೋಶಿಪ್ ದೊರೆಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಒಂದು ಕೋರ್ಸಿಗೆ ಒಂದು ಬಾರಿ ಮಾತ್ರ ಕ್ರಮವಾಗಿ ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.8,000/- ಮತ್ತು ರೂ.10,000/-ಗಳ ಉತ್ತೇಜಿತ ಧನಸಹಾಯ ನೀಡಲಾಗುತ್ತಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(04)ರಲ್ಲಿನ ಏಕ ಕಡತದಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು 2022-23ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯಗಳಲ್ಲಿ ಎಂ.ಫಿಲ್ ಮತ್ತು ಪಿ.ಹೆಚ್.ಡಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖಾ

ವತಿಯಿಂದ ನೀಡಲಾಗುತ್ತಿರುವ ಮಾದರಿಯಂತೆ ಹಾಗೂ ಅಲ್ಪಸಂಖ್ಯಾತರ ಸಮುದಾಯದ ಹೆಚ್ಚಿನ ವಿದ್ಯಾರ್ಥಿಗಳಿಗೆ ಇದರ ಸದುಪಯೋಗವಾಗುವ ಉದ್ದೇಶದಿಂದ ವಿಶ್ವವಿದ್ಯಾಲಯಗಳಲ್ಲಿ ಎಂ.ಫಿಲ್ ಮತ್ತು ಪಿ.ಹೆಚ್.ಡಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಒಂದು ಕೋರ್ಸಿಗೆ ಒಂದು ಬಾರಿ ಮಾತ್ರ ಕ್ರಮವಾಗಿ ಎಂ.ಫಿಲ್ ವಿದ್ಯಾರ್ಥಿಗೆ ಪ್ರತಿ ಮಾಹೆಯಾನ ರೂ.8,000/- ಮತ್ತು ಪಿ.ಹೆಚ್‌ಡಿ ವಿದ್ಯಾರ್ಥಿಗೆ ಪ್ರತಿ ಮಾಹೆಯಾನ ರೂ.10,000/-ಗಳ ಫೆಲೋಶಿಪ್ ನೀಡುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಕುರಿತಂತೆ ಅನುಮತಿ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

## ಸರ್ಕಾರಿ ಆದೇಶ ಸಂಖ್ಯೆ: MWD 198 MDS 2022, ಬೆಂಗಳೂರು ದಿನಾಂಕ: 28-06-2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಸಮುದಾಯದ ಹೆಚ್ಚಿನ ವಿದ್ಯಾರ್ಥಿಗಳಿಗೆ ಫೆಲೋಶಿಪ್ ನೀಡುವ ಉದ್ದೇಶದಿಂದ ಹಾಗೂ ಉನ್ನತ ವ್ಯಾಸಂಗ ಪಡೆಯಲು ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ, ಜೆ.ಆರ್.ಎಫ್. ಮಾದರಿಯಲ್ಲಿ ವಿಶ್ವವಿದ್ಯಾಲಯಗಳಲ್ಲಿ ಎಂ.ಫಿಲ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ 2 ವರ್ಷಗಳ ಅವಧಿಗೆ ಮತ್ತು ಪಿ.ಹೆಚ್.ಡಿ. ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ 3 ವರ್ಷಗಳ ಅವಧಿಗೆ ಒಂದು ಕೋರ್ಸಿಗೆ ಒಂದು ಬಾರಿ ಮಾತ್ರ ಕ್ರಮವಾಗಿ ಎಂ.ಫಿಲ್ ವಿದ್ಯಾರ್ಥಿಗೆ ಪ್ರತಿ ಮಾಹೆಯಾನ ರೂ.8,000/- ಮತ್ತು ಪಿ.ಹೆಚ್‌ಡಿ ವಿದ್ಯಾರ್ಥಿಗೆ ಪ್ರತಿ ಮಾಹೆಯಾನ ರೂ.10,000/-ಗಳ ಫೆಲೋಶಿಪ್ ನೀಡುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

**ಷರತ್ತುಗಳು:**

1. ವಿದ್ಯಾರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
2. ವಿದ್ಯಾರ್ಥಿಯು ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದವರಾಗಿರಬೇಕು. (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ದರು, ಸಿಖ್, ಮತ್ತು ಪಾರ್ಸಿ ಜನಾಂಗಕ್ಕೆ ಸೇರಿದವರಾಗಿರಬೇಕು)
3. ವಿದ್ಯಾರ್ಥಿಯ ವಯಸ್ಸು 35 ವರ್ಷಕ್ಕಿಂತ ಕಡಿಮೆ ಇರಬೇಕು.
4. ವಿದ್ಯಾರ್ಥಿಯ ಹಾಗೂ ಕುಟುಂಬದ ವಾರ್ಷಿಕ ಆದಾಯ ಮಿತಿ ಎಲ್ಲಾ ಮೂಲಗಳಿಂದ ವರ್ಷಕ್ಕೆ ರೂ.8.00 ಲಕ್ಷ (ಎಂಟು ಲಕ್ಷ ರೂಪಾಯಿಗಳು ಮಾತ್ರ) ಮೀರಿರಬಾರದು.
5. ವಿದ್ಯಾರ್ಥಿಯು ಯಾವುದೇ ಸರ್ಕಾರಿ ಉದ್ಯೋಗಿಯಾಗಿರಬಾರದು.
6. ಪಿ.ಹೆಚ್.ಡಿ/ಎಂ.ಫಿಲ್ ವ್ಯಾಸಂಗವನ್ನು ಭಾರತ ಸರ್ಕಾರದ ಶಾಸನಬದ್ಧ ಅಂಗೀಕೃತವಾದ ವಿಶ್ವವಿದ್ಯಾಲಯಗಳಲ್ಲಿ ಮಾಡತಕ್ಕದ್ದು.
7. ಈ ಹಿಂದೆ ಆಯ್ಕೆಯಾಗಿ ನವೀಕರಣಗೊಂಡ ಅರ್ಹ ಎಂ.ಫಿಲ್ ಮತ್ತು ಪಿ.ಹೆಚ್.ಡಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರತಿ ಮಾಹೆಯಾನ ರೂ.25,000/-ಗಳನ್ನು ಮತ್ತು ಪ್ರತಿ ವರ್ಷಕ್ಕೆ ಒಂದು ಬಾರಿಗೆ ರೂ.10,000/-ಗಳ ನಿರ್ವಹಣಾ ವೆಚ್ಚವನ್ನು ನೀಡತಕ್ಕದ್ದು.
8. 2021-22ನೇ ಸಾಲಿನಲ್ಲಿ ನೋಂದಣಿಯಾಗಿ ಪ್ರವೇಶಾತಿ ಪಡೆದಿರುವ ಹೊಸ ವಿದ್ಯಾರ್ಥಿಗಳಿಗೆ ಎಂ.ಫಿಲ್ ಮತ್ತು ಪಿ.ಹೆಚ್.ಡಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರತಿ ಮಾಹೆಯಾನ ರೂ.25,000/-ಗಳನ್ನು ಮತ್ತು ಪ್ರತಿ ವರ್ಷಕ್ಕೆ ಒಂದು ಬಾರಿಗೆ ರೂ.10,000/-ಗಳ ನಿರ್ವಹಣಾ ವೆಚ್ಚವನ್ನು ನೀಡತಕ್ಕದ್ದು.